# All India Radio: Bangalore
## Regional Bulletin In Kannada
## 31.08.2025 / 6.40 p.m.

**ಆಕಾಶವಾಣಿ ಬೆಂಗಳೂರು**

**ಪ್ರದೇಶ ಸಮಾಚಾರ**

**31.08.2025 / 6.40 p.m.**

**<><><><>**

ಮುಖ್ಯಾಂಶಗಳು

೧. ನೈಸರ್ಗಿಕ ವಿಪತ್ತುಗಳ ಸಂದರ್ಭದಲ್ಲಿ ವಿಪತ್ತು ನಿರ್ವಹಣಾ ಪಡೆಗಳ ಕಾರ್ಯ ಶ್ಲಾಘನೀಯ - ಮನ್ ಕಿ ಬಾತ್‌ನಲ್ಲಿ ಪ್ರಧಾನಿ ನರೇಂದ್ರ ಮೋದಿ

೨. ಎರಡು ದಿನಗಳ ಪ್ರವಾಸಕ್ಕಾಗಿ ನಾಳೆ ಮೈಸೂರಿಗೆ ರಾಷ್ಟ್ರಪತಿ ಭೇಟಿ

೩. ಕನ್ನಡ ತಾಯಿ ಭುವನೇಶ್ವರಿಗೆ ಅವಮಾನ ಮಾಡಿದ ಸಾಹಿತಿ ಬಾನು ಮುಷ್ತಾಕ್ ಕನ್ನಡಿಗರ ಕ್ಷಮೆಯಾಚಿಸಲಿ - ಬಿಜೆಪಿ ಆಗ್ರಹ

೪. ಬೆಂಗಳೂರು ಜಲಮಂಡಳಿ ಕಾರ್ಮಿಕರಿಗಾಗಿ ಅನ್ನಪೂರ್ಣ ಯೋಜನೆ ಜಾರಿ

><><><><><><><><

ವೋಕಲ್ ಫಾರ್ ಲೋಕಲ್, ಆತ್ಮನಿರ್ಭರ್ ಭಾರತ್ ಮತ್ತು ವಿಕಸಿತ ಭಾರತದ ಗುರಿಯನ್ನು ಮುಂದಿಟ್ಟುಕೊಂಡು ಭಾರತ, ಪ್ರಗತಿಪಥದಲ್ಲಿ ಸಾಗಬೇಕು ಎಂದು ಪ್ರಧಾನಿ ನರೇಂದ್ರ ಮೋದಿ ಹೇಳಿದ್ದಾರೆ. ಆಕಾಶವಾಣಿಯ ಜನಪ್ರಿಯ ಮನ ಕಿ ಬಾತ್ ಕಾರ್ಯಕ್ರಮದ ೧೨೫ನೇ ಆವೃತ್ತಿಯಲ್ಲಿ ಸಮಸ್ತ ಭಾರತೀಯರನ್ನು ಉದ್ದೇಶಿಸಿ ಮಾತನಾಡಿದ ಅವರು, ಮೊದಲಿಗೆ ದೇಶ ಎದುರಿಸುತ್ತಿರುವ ನೈಸರ್ಗಿಕ ವಿಪತ್ತುಗಳ ಕುರಿತು ಪ್ರಸ್ತಾಪಿಸಿದರು. ಈ ಮಳೆಯ ಋತುವಿನಲ್ಲಿ ಎದುರಾಗಿರುವ ನೈಸರ್ಗಿಕ ವಿಪತ್ತುಗಳು ದೇಶಕ್ಕೆ ಸವಾಲಾಗಿ ಪರಿಣಮಿಸಿವೆ. ಕಳೆದ ಕೆಲವು ವಾರಗಳಲ್ಲಿ ಭಾರೀ ಮಳೆ, ನೆರೆ ಮತ್ತು ಭೂಕುಸಿತದಿಂದ ದೇಶದ ಹಲವೆಡೆ ವಿಪತ್ತು ಉಂಟಾಗಿದೆ. ತಮ್ಮ ಪ್ರೀತಿಪಾತ್ರರನ್ನು ಕಳೆದುಕೊಂಡ ಕುಟುಂಬಗಳ ನೋವು ನಮ್ಮೆಲ್ಲರ ನೋವು ಎಂದು ಅವರು ನುಡಿದರು. ಎನ್‌ಡಿಆರ್‌ಎಫ್, ಎಸ್‌ಡಿಆರ್‌ಎಫ್ ಮತ್ತಿತರ ಭದ್ರತಾ ಪಡೆಗಳು ನಿರಂತರ ಶ್ರಮಿಸಿ ಅಪಾಯದಿಂದ ಜನರನ್ನು ರಕ್ಷಿಸಿದ್ದಾರೆ. ತಂತ್ರಜ್ಞಾನವನ್ನು ಸಹ ಬಳಸಿ, ಥರ್ಮಲ್ ಕ್ಯಾಮೆರಾ, ಲೈಫ್ ಡಿಟೆಕ್ಟರ್, ಸ್ನಿಫರ್ ನಾಯಿ, ಡ್ರೋನ್ ನಿಗಾವಣೆ ಮುಂತಾದವುಗಳಿಂದ ನೆರವು ಕಾರ್ಯ

ತ್ವರಿತಗೊಳಿಸಲಾಗಿದೆ. ಸ್ಥಳೀಯ ನಾಗರಿಕರು, ಸಮಾಜ ಸೇವಕರು, ವೈದ್ಯರು ಮತ್ತು ಆಡಳಿತ ವ್ಯವಸ್ಥೆಯೂ ತ್ವರಿತ ಪ್ರತಿಕ್ರಿಯೆ ನೀಡಿದೆ ಎಂದ ಪ್ರಧಾನಿ ನರೇಂದ್ರ ಮೋದಿ ಹೇಳಿದರು.

ಧ್ವನಿ: ಪ್ರಧಾನಿ   ( ೨೨ ಸೆಕೆಂಡ್‌ಗಳು)

ಬಿಹಾರದ ದೇವಕೀ ಅವರು ಸೋಲಾರ್ ಪಂಪ್‌ನಿಂದ ಗ್ರಾಮದ ಅದೃಷ್ಟವನ್ನೇ ಬದಲಾಯಿಸಿದ್ದಾರೆ. ಮುಜಾಫ್ಫರ್‌ಪುರದ ರತನ್‌ಪುರ ಗ್ರಾಮದ ನಿವಾಸಿ ದೇವಕಿ ಅವರನ್ನು ಜನರು ಈಗ ಪ್ರೀತಿಯಿಂದ ಸೋಲಾರ್ ಸೋದರಿ ಎಂದು ಕರೆಯುತ್ತಾರೆ ಎಂದು ಪ್ರಧಾನಿ ಹೇಳಿದರು. ದೇವಕಿ ಅವರ ಜೀವನ ಸುಲಭವೇನೂ ಆಗಿರಲಿಲ್ಲ. ಸಣ್ಣ ವಯಸ್ಸಿನಲ್ಲೇ ವಿವಾಹವಾಗಿತ್ತು. ಸಣ್ಣದೊಂದು ಹೊಲ, ನಾಲ್ಕು ಮಕ್ಕಳ ಜವಾಬ್ದಾರಿ ಮತ್ತು ಭವಿಷ್ಯದ ಯಾವುದೇ ಸ್ಪಷ್ಟ ಚಿತ್ರಣವಿರಲಿಲ್ಲ. ಆದರೆ ಅವರು ಎಂದಿಗೂ ಎದೆಗುಂದಲಿಲ್ಲ. ಅವರು ಒಂದು ಸ್ವ-ಸಹಾಯ ಗುಂಪಿನ ಸಂಪರ್ಕ ಸಾಧಿಸಿದರು ಮತ್ತು ಅಲ್ಲಿಯೇ ಅವರಿಗೆ ಸೋಲಾರ್ ಪಂಪ್‌ನ ಬಗ್ಗೆ ಮಾಹಿತಿ ದೊರೆಯಿತು. ಅವರು ಸೋಲಾರ್ ಪಂಪ್‌ಗಾಗಿ ಪ್ರಯತ್ನ ಆರಂಭಿಸಿದರು ಮತ್ತು ಅದರಲ್ಲಿ ಯಶಸ್ವಿಯಾದರು ಎಂದು ಪ್ರಧಾನಿ ನರೇಂದ್ರ ಮೋದಿ ವಿವರಿಸಿದರು.

><><><><><><><><

ಹುಬ್ಬಳ್ಳಿಯ ಮರಾಠಾ ಗಲ್ಲಿಯಲ್ಲಿನ 'ಚಾ ಮಹಾರಾಜಾ ಗಣಪತಿ' ಮಂಟಪದಲ್ಲಿ ಹುಬ್ಬಳ್ಳಿ-ಧಾರವಾಡ ಮಹಾನಗರ ಜಿಲ್ಲಾ ಬಿಜೆಪಿ ಯುವ ಮೋರ್ಚಾ ವತಿಯಿಂದ ಆಯೋಜಿಸಲಾಗಿದ್ದ ಪ್ರಧಾನಿ ನರೇಂದ್ರ ಮೋದಿ ಅವರ ೧೨೫ನೇ 'ಮನ್ ಕಿ ಬಾತ್' ಆವೃತ್ತಿಯನ್ನು ಕೇಂದ್ರ ಸಚಿವ ಪ್ರಲ್ಹಾದ ಜೋಶಿ ಆಲಿಸಿದರು.  ನಂತರ ಮಾತನಾಡಿದ ಅವರು, ಸಾಮಾಜಿಕ, ಸಾಂಸ್ಕೃತಿಕ ಮತ್ತು ರಾಷ್ಟ್ರೀಯ ವಿಷಯಗಳನ್ನು ಚರ್ಚಿಸುವ ಕಾರ್ಯಕ್ರಮವಾಗಿರುವ 'ಮನ್ ಕಿ ಬಾತ್', ಜನಸಾಮಾನ್ಯರಿಗೆ ಸ್ಫೂರ್ತಿ ನೀಡುವ, ಸರ್ಕಾರದ ಯೋಜನೆಗಳನ್ನು ತಿಳಿಸುವ ಮತ್ತು ಒಗ್ಗಟ್ಟನ್ನು ಉತ್ತೇಜಿಸುವ ಒಂದು ವೇದಿಕೆಯಾಗಿದೆ ಎಂದು ಹೇಳಿದರು.  ರಾಮನಗರ ಜಿಲ್ಲೆಯಲ್ಲಿಂದು 'ಮನ್ ಕಿ ಬಾತ್' ಕಾರ್ಯಕ್ರಮವನ್ನು ಸಂಸದ ಡಾ. ಸಿ.ಎನ್.ಮಂಜುನಾಥ್ ಆಲಿಸಿದರು. ಈ ವೇಳೆ ಮಾತನಾಡಿದ ಅವರು, 'ಮನ್ ಕಿ ಬಾತ್' ಕಾರ್ಯಕ್ರಮವು ದೇಶದ ನಾಗರಿಕರಲ್ಲಿ ಸಕಾರಾತ್ಮಕ ಚಿಂತನೆ ಮೂಡಿಸಿ, ಸಮಾಜಮುಖಿ ಚಟುವಟಿಕೆಗಳತ್ತ ಪ್ರೇರೇಪಿಸುತ್ತದೆ. ಗ್ರಾಮೀಣ ಮಟ್ಟದಿಂದಲೇ

ಜನಸಾಮಾನ್ಯರ ಪಾಲ್ಗೊಳ್ಳುವಿಕೆಯನ್ನು ಉತ್ತೇಜಿಸುವ ಈ ಕಾರ್ಯಕ್ರಮ ನಿಜಕ್ಕೂ ಮಾದರಿಯಾಗಿದೆ ಎಂದು ಹೇಳಿದರು.

><><><><><><><><

ಎರಡು ದಿನಗಳ ಭೇಟಿಗಾಗಿ ರಾಷ್ಟ್ರಪತಿ ದ್ರೌಪದಿ ಮುರ್ಮು ಅವರು ನಾಳೆ ಮೈಸೂರಿಗೆ ಆಗಮಿಸಲಿದ್ದಾರೆ. ಅವರು ನಾಳೆ ಮೈಸೂರಿನ ಅಖಿಲ ಭಾರತ ವಾಕ್ ಮತ್ತು ಶ್ರವಣ ಸಂಸ್ಥೆಯ ವಜ್ರ ಮಹೋತ್ಸವದಲ್ಲಿ ಭಾಗವಹಿಸಲಿದ್ದಾರೆ. ನಂತರ ರಾಷ್ಟ್ರಪತಿಯವರು, ಚಾಮುಂಡಿ ಬೆಟ್ಟಕ್ಕೆ ಭೇಟಿ ನೀಡಿ, ತಾಯಿ ಚಾಮುಂಡೇಶ್ವರಿಯ ದರ್ಶನ ಪಡೆಯಲಿದ್ದಾರೆ.  ರಾಜವಂಶಸ್ಥೆ ಪ್ರಮೋದಾದೇವಿ ಒಡೆಯರ್ ಅವರ ಆಹ್ವಾನದ ಮೇರೆಗೆ ರಾಷ್ಟ್ರಪತಿಯವರು ನಾಡಿದ್ದು ಮೈಸೂರು ಅರಮನೆಗೂ ಭೇಟಿ ನೀಡಲಿದ್ದಾರೆ. ಹೀಗಾಗಿ ಸೆಪ್ಟೆಂಬರ್ ೧ ಹಾಗೂ ೨ ರಂದು ಮೈಸೂರು ಅರಮನೆಗೆ ಪ್ರವಾಸಿಗರ ಪ್ರವೇಶವನ್ನು ನಿರ್ಬಂಧಿಸಲಾಗಿದೆ.

><><><><><><><><

ವಿಶ್ವವಿಖ್ಯಾತ ನಾಡಹಬ್ಬ ಮೈಸೂರು ದಸರಾ ಮಹೋತ್ಸವವನ್ನು ಸಾಂಸ್ಕೃತಿಕವಾಗಿ ಮಾಡಲಾಗುತ್ತಿದ್ದು, ಇದು ಎಲ್ಲರ ಹಬ್ಬವಾಗಿದೆ. ದಸರಾ ಉದ್ಘಾಟನೆ ವಿಷಯದಲ್ಲಿ ರಾಜಕೀಯ ಬೇಡ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಹೇಳಿದ್ದಾರೆ.  ಈ ಕುರಿತು ಮೈಸೂರಿನಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ದಸರಾ ಸಮಿತಿಯಲ್ಲಿ ನಾವು ಬೂಕರ್ ಪ್ರಶಸ್ತಿ ವಿಜೇತೆ ಬಾನು ಮುಷ್ತಾಕ್ ಅವರಿಂದ ಉದ್ಘಾಟಿಸಬೇಕೆಂದು ತೀರ್ಮಾನ ಮಾಡಿದ್ದೇವೆ. ವಿರೋಧ ಮಾಡುತ್ತಿರುವವರಿಗೆ ಇತಿಹಾಸ ಗೊತ್ತಿಲ್ಲ.  ಬಿಜೆಪಿಯವರು ಜ್ಯಾತ್ಯಾತೀತವಾಗಿ ಮಾತನಾಡುವುದಿಲ್ಲ ಎಂದರು.

ಧ್ವನಿ: ಮುಖ್ಯಮಂತ್ರಿ ಸಿದ್ದರಾಮಯ್ಯ ( 31 ಸೆಕೆಂಡ್)

><><><><><><><><

ಚಾಮುಂಡಿ ಬೆಟ್ಟದ ವಿಚಾರದಲ್ಲಿ ಹಿಂದೂಗಳ ಭಾವನೆಗೆ ಧಕ್ಕೆ ತರದಂತೆ ರಾಜ್ಯ ಸರ್ಕಾರ ಮುಂದಿನ ನಿರ್ಧಾರ ತೆಗೆದುಕೊಳ್ಳಲಿ ಎಂದು ವಿರೋಧ ಪಕ್ಷದ ನಾಯಕ ಆರ್.ಅಶೋಕ ಆಶಿಸಿದ್ದಾರೆ.  ಮೈಸೂರಿನ ಚಾಮುಂಡಿ ಬೆಟ್ಟಕ್ಕೆ ಭೇಟಿ ನೀಡಿ ನಂತರ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಚಾಮುಂಡೇಶ್ವರಿ ದೇವಾಲಯ ಹಿಂದೂಗಳು ದೇವಾಲಯ ಅಲ್ಲ ಎಂದು

ಕಾಂಗ್ರೆಸ್ ನಾಯಕರು ಹೇಳಿದ್ದಾರೆ. ಹಿಂದೂಗಳದ್ದಲ್ಲ ಎಂದರೆ ಮತ್ಯಾರದ್ದು? ಪದೇ ಪದೆ ಹಿಂದೂ ದೇವಾಲಯಗಳ ಟಾರ್ಗೆಟ್ ಏಕೆ ಎಂದು ಪ್ರಶ್ನಿಸಿದ್ದಾರೆ. ಈ ಹಿಂದೆ ಬಾನು ಮುಷ್ತಾಕ್, ಕನ್ನಡವನ್ನು ಭುವನೇಶ್ವರಿ ಮಾಡಿದ್ದೀರಾ. ಅರಿಶಿನ -ಕುಂಕುಮ ಬಣ್ಣದ ಧ್ವಜ ಮಾಡಿದ್ದೀರಾ. ನಾವು ಭುವನೇಶ್ವರಿಯನ್ನು ಒಪ್ಪಿಕೊಳ್ಳಲ್ಲ ಎಂದಿದ್ದರು. ಭುವನೇಶ್ವರಿ ಒಪ್ಪದಿದ್ದ ಮೇಲೆ ಚಾಮುಂಡೇಶ್ವರಿ ಹೇಗೆ ಒಪ್ಪುತ್ತೀರಾ ಎಂದು ಪ್ರಶ್ನಿಸಿದ ಅವರು, ಬಾನು ಮುಷ್ತಾಕ್ ಕನ್ನಡ ಧ್ವಜಕ್ಕೆ ಅವಮಾನ ಮಾಡಿದ್ದಾರೆ. ಅವರು ಕನ್ನಡಿಗರ ಕ್ಷಮೆ ಕೇಳಬೇಕು ಎಂದು ಆರ್.ಅಶೋಕ ಆಗ್ರಹಿಸಿದ್ದಾರೆ.

><><><><><><><><><

ಬಿಜೆಪಿ ಸ್ವಾರ್ಥ ರಾಜಕಾರಣವನ್ನು ಬಿಟ್ಟು, ಕೇಂದ್ರ ಸರ್ಕಾರದಿಂದ ರಾಜ್ಯಕ್ಕೆ ಬರಬೇಕಾದ ಅನುದಾನ ಒದಗಿಸಲು ಹೋರಾಟ ಮಾಡಲಿ ಎಂದು ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಖಾತೆ ಸಚಿವ ದಿನೇಶ್ ಗುಂಡೂರಾವ್ ಆಗ್ರಹಿಸಿದ್ದಾರೆ. ಮಂಗಳೂರಿನಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ರಾಜಕೀಯ ಲಾಭಕ್ಕಾಗಿ, ಧರ್ಮಸ್ಥಳ ವಿಚಾರವನ್ನಿಟ್ಟುಕೊಂಡು ರಾಜಕಾರಣ ಮಾಡುವುದನ್ನು ಬಿಜೆಪಿ ಮೊದಲು ಬಿಡಬೇಕು. ಇದು ಶೋಭೆಯಲ್ಲ ಎಂದರು. ಧರ್ಮಸ್ಥಳದ ರಕ್ಷಣೆಗೆ ಸರ್ಕಾರವಿದೆ. ಎಸ್‌ಐಟಿ ನಿಜಾಂಶ ಹೊರಗೆ ತರುವ ಕೆಲಸ ಮಾಡುತ್ತಿದೆ. ಬಿಜೆಪಿಯವರಿಗೆ ಬೇರೆ ವಿಷಯವಿಲ್ಲ. ಸರ್ಕಾರಕ್ಕೆ ಕೆಟ್ಟ ಹೆಸರು ತರಲು ಸಮಾವೇಶಕ್ಕೆ ಮುಂದಾಗಿದ್ದಾರೆ ಎಂದು ಸಚಿವ ದಿನೇಶ್ ಗುಂಡೂರಾವ್ ಟೀಕಿಸಿದರು.

><><><><><><><><><

ಬೆಂಗಳೂರು ನಗರವನ್ನು ಸ್ವಚ್ಛವಾಗಿ ಇಡಲು ಹಗಲು-ರಾತ್ರಿ ಶ್ರಮಿಸುತ್ತಿರುವ ಬೆಂಗಳೂರು ಜಲಮಂಡಳಿ ನೈರ್ಮಲ್ಯೀಕರಣ ಕಾರ್ಮಿಕರ ಆರೋಗ್ಯ, ಗೌರವ ಮತ್ತು ಆರ್ಥಿಕ ಸ್ವಾತಂತ್ರ್ಯವನ್ನು ಉತ್ತೇಜಿಸುವ ನಿಟ್ಟಿನಲ್ಲಿ 'ಜಲಮಂಡಳಿ ಅನ್ನಪೂರ್ಣ ಯೋಜನೆ'ಯನ್ನು ರೂಪಿಸಲಾಗಿದೆ ಎಂದು ಜಲಮಂಡಳಿ ಅಧ್ಯಕ್ಷ ಡಾ. ರಾಮ್ ಪ್ರಸಾತ್ ಮನೋಹರ್ ತಿಳಿಸಿದ್ದಾರೆ. ಬೆಂಗಳೂರು ಜಲಮಂಡಳಿಯು ದೇಶದಲ್ಲೇ ಮೊದಲ ಬಾರಿಗೆ ತಂತ್ರಜ್ಞಾನ ಆಧಾರಿತವಾಗಿ ಹಾಗೂ ಪ್ರತಿ ತಿಂಗಳೂ ನೇರವಾಗಿ ಕಾರ್ಮಿಕರಿಗೆ ಹಣ ವರ್ಗಾವಣೆ ಮಾಡುವ 'ಜಲಮಂಡಳಿ ಅನ್ನಪೂರ್ಣ ಯೋಜನೆ' ಯನ್ನು ಜಾರಿಗೊಳಿಸುತ್ತಿದೆ ಎಂದರು. ಈ ಯೋಜನೆಯ ಅಡಿಯಲ್ಲಿ ಬೆಂಗಳೂರು ಜಲಮಂಡಳಿಯ ೭೦೦ ಕ್ಕೂ ಹೆಚ್ಚು ನೈರ್ಮಲ್ಯೀಕರಣ ಕಾರ್ಮಿಕರಿಗೆ ಸ್ಮಾರ್ಟ್ ಕಾರ್ಡ್

ವಿತರಿಸಲಾಗುವುದು. ಕಾರ್ಮಿಕರು ಈ ಹಣದಿಂದ ತಮಗೆ ಇಷ್ಟವಾದ ಆಹಾರ ಸೇವಿಸಬಹುದು ಎಂದು ಅವರು

><><><><><><><><><

ಅತಿವೃಷ್ಟಿಯಿಂದ ನಷ್ಟ ಅನುಭವಿಸಿದ ರೈತರಿಗೆ ಸರ್ಕಾರ ನಿಯಮಾನುಸಾರ ಪರಿಹಾರ ನೀಡುತ್ತದೆ. ಪರಿಹಾರ ಕಾರ್ಯಗಳಲ್ಲಿ ಯಾವುದೇ ಲೋಪ-ದೋಷಗಳಾಗದಂತೆ ಅಧಿಕಾರಿಗಳು ಎಚ್ಚರ ವಹಿಸಬೇಕು ಎಂದು ಕಾರ್ಮಿಕ ಸಚಿವ ಸಂತೋಷ ಎಸ್.ಲಾಡ್ ಧಾರವಾಡದಲ್ಲಿಂದು ಅಧಿಕಾರಿಗಳಿಗೆ ಸೂಚಿಸಿದ್ದಾರೆ.

ಧ್ವನಿ: ಸಂತೋಷ ಎಸ್.ಲಾಡ್, ( 25 ಸೆಕೆಂಡ್)

><><><><><><><><><